# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಬಿಎಡ್ ಹಾಗೂ ಡಿಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ರೂ.25,000/-ಗಳ ವಿಶೇಷ ಪ್ರೋತ್ಸಾಹ ಧನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:** 1. 2018-19ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ 225**.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ಬಿಎಡ್&ಡಿಎಡ್/ಪ್ರೋ.ಧ/ಸಿಆರ್-17/2018-19 ದಿನಾಂಕ: 02-04-2018

>>()<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು **ಕಂಡಿಕೆ 225ರಲ್ಲಿ ಬಿಎಡ್ ಹಾಗೂ ಡಿಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ರೂ.25,000/-ಗಳ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು ಎಂದು ಘೋಷಿಸಿರುತ್ತಾರೆ**.

ಕೇಂದ್ರ ಸರ್ಕಾರದ ಯೋಜನೆಯಡಿ ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನವನ್ನು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧರು ಮತ್ತು ಪಾರ್ಸಿ ಜನಾಂಗದವರಿಗೆ ನೀಡಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ ಹಾಗೂ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಸಹ ನೀಡಲಾಗುತ್ತಿದೆ. ಅದರಂತೆ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಗ್ರಾಮೀಣ ಮತ್ತು ನಗರ ವಿಭಾಗದ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸವನ್ನು ಮುಂದುವರೆಸಲು ಪ್ರೋತ್ಸಾಹಿಸಿ ಕಲಿಕಾ ಮತ್ತು ಬೋಧನಾ ಸಾಮಗ್ರಿಗಳನ್ನು ಖರೀದಿಸಲು ಆರ್ಥಿಕ ಸಹಾಯ ಮಾಡುವ ಹಿತದೃಷ್ಟಿಯಿಂದ National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ ಮತ್ತು ಡಿ.ಎಡ್ ಕೋರ್ಸುಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ರೂ.25,000/-ಗಳ ವಿಶೇಷ ಪ್ರೋತ್ಸಾಹಧನ ನೀಡಲು ಉದ್ದೇಶಿಸಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-03-277-2-61 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ ಯೋಜನೆಯಡಿ ಒದಗಿಸುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯರವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

...2

## ಸರ್ಕಾರದ ಆದೇಶ ಸಂಖ್ಯೆ: MWD 279 MDS 2018 ದಿನಾಂಕ: 15-10-2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೂಲಂಕುಷವಾಗಿ ಪರಿಶೀಲಿಸಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ (B.Ed) ಮತ್ತು ಡಿ.ಎಡ್ (D.Ed) ಕೋರ್ಸುಗಳಲ್ಲಿ 2018-19ನೇ ಸಾಲಿನಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ **ರೂ.25,000/-ಗಳ (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)** ವಿಶೇಷ ಪ್ರೋತ್ಸಾಹಧನ ಪ್ರತಿ ವರ್ಷ ನೀಡಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಷ್ಠಾನಗೊಳಿಸಲು ಆದೇಶಿಸಿದೆ.

### ಷರತ್ತುಗಳು:-

1. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.
2. ಸದರಿ ಕೋರ್ಸ್‌ಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ (ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು.
3. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಗರಿಷ್ಠ ವರಮಾನ ರೂ. 6.00 ಲಕ್ಷಕ್ಕೆ ಮೀರಿರಬಾರದು.
4. ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡತಕ್ಕದ್ದು.
5. ಆಯಾ ವರ್ಷದಲ್ಲಿ ಲಭ್ಯವಿರುವ ಅನುದಾನಕ್ಕೆ ಸೀಮಿತಗೊಳಿಸಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.
6. ಈ ಪ್ರೋತ್ಸಾಹಧನ ಪಡೆಯುವ ವಿದ್ಯಾರ್ಥಿಗಳು ಭಾರತ ಸರ್ಕಾರ ಅಥವಾ ಇತರೆ ವಿದ್ಯಾರ್ಥಿವೇತನ/ಶಿಷ್ಯವೇತನ ಪಡೆಯಲು ಅರ್ಹರಿರುತ್ತಾರೆ.
7. ಈ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳು ಸರ್ಕಾರಿ/ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ನಿಯಮಾನುಸಾರ ಪ್ರವೇಶ ಪಡೆಯಲು ಅರ್ಹರಿರುತ್ತಾರೆ.
8. ವಿದ್ಯಾರ್ಥಿಗಳು ಡಿ.ಎಡ್ ಮತ್ತು ಬಿ.ಎಡ್ ಕೋರ್ಸುಗಳಲ್ಲಿ ದಾಖಲಾಗಿರುವ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಎಲ್ಲಾ ಅಧಿಕೃತ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು .
9. National Council for Teacher Education ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ Department of State Educational Research and Training ನಿಂದ ಮಾನ್ಯತೆ ಪಡೆದಿರುವ ಡಿ.ಎಡ್ ಕೋರ್ಸ್‌ಗಳ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ.
10. ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಹತೆ ಪರೀಕ್ಷೆ/ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಕನಿಷ್ಠ 50% ರಷ್ಟು ಅಂಕಗಳನ್ನು ಪಡೆದಿರತಕ್ಕದ್ದು. ಉತ್ತೀರ್ಣರಾಗದ ಅಭ್ಯರ್ಥಿಗಳು ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುವುದಿಲ್ಲ.
11. ಮೊದಲನೇ ವರ್ಷದಲ್ಲಿ ಪ್ರೋತ್ಸಾಹಧನ ಪಡೆದಿರುವ ಅಭ್ಯರ್ಥಿಗಳು ಎರಡನೇ ವರ್ಷಕ್ಕೆ ಪ್ರೋತ್ಸಾಹಧನ ಪಡೆಯಲು ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.
ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಕನಿಷ್ಠ ಶೇಕಡ 50%ರಷ್ಟು ಬಾಲಕಿಯರಿಗೆ ಮೀಸಲಿರಿಸತಕ್ಕದ್ದು ಹಾಗೂ ಡಿ.ಎಡ್ ಕೋರ್ಸಿಗೆ ಶೇಕಡ 25%ರಷ್ಟು ಮತ್ತು ಬಿ.ಎಡ್ ಕೋರ್ಸಿನ ಅಭ್ಯರ್ಥಿಗಳಿಗೆ ಶೇಕಡ 75%ರಷ್ಟು ಅನುಪಾತದಲ್ಲಿ ಉಪಯೋಗಿಸುವುದು.
13. ಸುಳ್ಳು ಮಾಹಿತಿ, ದಾಖಲಾತಿ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಧನ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೀಡಲಾದ ಪ್ರೋತ್ಸಾಹಧನ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸತಕ್ಕದ್ದು.

...3